ದಿ: ೪.೦೪.೨೦೨೪ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ವಾದಿ ಪರವಾಗಿ ಶ್ರೀ ಎಸ್.ಎಸ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ದಿ: ೯.೦೯.೨೦೧೯ ರಂದು ಆಗಿರುವ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧ ಎಂದು,ಕಾಚಾರಕನಹಳ್ಳಿ ಗ್ರಾಮದ ಸರ್ವೆ ನಂ.೬೯/೧ ನೇದರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೨ ಎಂದು, ಎಂ.ಆರ್.ನಂ. ಹೆಚ್–೮ ದಿ: ೯.೦೯.೨೦೧೯ ನೇದರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೩ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ಶ್ರೀ ಎಸ್.ಎಸ್ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**